ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ ಸದಸ್ಯರ ಹೆಸರು:	ಡಾ: ಕೆ.ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	2345
ಉತ್ತರಿಸಬೇಕಾದ ದಿನಾಂಕ:	21-03-2022
ಉತ್ತರಿಸುವ ಸಚಿವರು:	ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ ಒಬ್ಬ ವಿದ್ಯಾರ್ಥಿ ಎಂ.ಬಿ.ಬಿ.ಎಸ್ ಪದವಿ ಶಿಕ್ಷಣವನ್ನು ಮುಗಿಸಲು ತಗುಲುವ ಖರ್ಚು ಎಷ್ಟು; (ಸರ್ಕಾರ ಅನುದಾನಿತ, ಖಾಸಗಿ ವರ್ಷಾವಾರು ಪ್ರತ್ಯೇಕ ಶುಲ್ಕದ ಸಂಪೂರ್ಣ ಮಾಹಿತಿಯನ್ನು ನೀಡುವುದು)	ಎಂಬಿಬಿಎಸ್ ಪದವಿ ಶಿಕ್ಷಣವನ್ನು ಮುಗಿಸಲು ತಗುಲುವ ಶುಲ್ಕದ ಮಾಹಿತಿಯನ್ನು ಅನುಬಂಧ-01ರಲ್ಲಿ ಲಗತ್ತಿಸಿದೆ.
ಆ)	ರಾಜ್ಯದಲ್ಲಿ ಬಡ, ಮಧ್ಯಮ ವರ್ಗದ ವಿದ್ಯಾರ್ಥಿಗಳ ಎಂ.ಬಿ.ಬಿ.ಎಸ್ ಪದವಿ ಶಿಕ್ಷಣ ಪಡೆಯುವುದು ದುಬಾರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶುಲ್ಕ ಕಡಿಮೆಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;	ರಾಜ್ಯದಲ್ಲಿ ಬಡ, ಮಧ್ಯಮ ವರ್ಗದ ವಿದ್ಯಾರ್ಥಿಗಳ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣವನ್ನು ಪಡೆಯುವುದು ದುಬಾರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ರಾಜ್ಯದಲ್ಲಿ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಸರ್ಕಾರಿ ಖೋಟಾದಡಿ ಆಯ್ಕೆಯಾದ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣದ ಶುಲ್ಕವು ರೂ.50,000/-, ಖಾಸಗಿ ವೈದ್ಯಕೀಯ ಕಾಲೇಜು/ಡೀಮ್ಡ್ ವಿಶ್ವವಿದ್ಯಾಲಯಗಳಲ್ಲಿ ಆಯ್ಕೆಯಾದ ಸರ್ಕಾರಿ ಖೋಟಾದ ವಿದ್ಯಾರ್ಥಿಯು ಪಾವತಿಸಬೇಕಾದ ಶುಲ್ಕವು ರೂ.1,28,746/- ಹಾಗೂ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ಆಯ್ಕೆಯಾದ ವಿದ್ಯಾರ್ಥಿಯು ಪಾವತಿಸಬೇಕಾದ ಶುಲ್ಕವು ರೂ.9,81,956/-ಗಳಾಗಿರುತ್ತದೆ. ಕಳೆದ 02 ವರ್ಷಗಳಿಂದ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣದ ಶುಲ್ಕವನ್ನು ಹೆಚ್ಚಳ ಮಾಡಿರುವುದಿಲ್ಲ ಹಾಗೂ ಎಸ್.ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ ಶಿಷ್ಯವೇತನವು ಕೂಡಾ ಲಭ್ಯವಿರುತ್ತದೆ.
ಇ)	ರಾಜ್ಯದಲ್ಲಿ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣ ದುಬಾರಿಯೇ; ರಷ್ಯಾ, ಉಕ್ರೇನ್ ನಂತಹ ದೇಶಗಳಿಗೆ ತೆರಳುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ರಾಜ್ಯದ ಮತ್ತು ಈ ದೇಶಗಳಲ್ಲಿ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣ ಪೂರೈಸಲು ತಗಲುವ ಶುಲ್ಕದ ವ್ಯತ್ಯಾಸ ಎಷ್ಟು;	2021-22ನೇ ಸಾಲಿಗೆ ಸಂಬಂಧಿಸಿದಂತೆ ರಾಜ್ಯದಲ್ಲಿನ ಸರ್ಕಾರಿ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ಸರ್ಕಾರಿ ಖೋಟಾದಡಿ ಆಯ್ಕೆಯಾದ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣದ ಶುಲ್ಕವು ರೂ.50,000/-ಗಳಾಗಿರುತ್ತದೆ. ರಷ್ಯಾ, ಉಕ್ರೇನ್ ಹಾಗೂ ಇನ್ನಿತರೇ ದೇಶಗಳ ಶುಲ್ಕದ ಮಾಹಿತಿಯು ಲಭ್ಯವಿರುವುದಿಲ್ಲ.

ಈ)	ರಾಜ್ಯದ ಆಸಕ್ತ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣ ಪೂರೈಸುವ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ರಾಜ್ಯದ ಶೈಕ್ಷಣಿಕ ವಾತಾವರಣವನ್ನು ವಿದ್ಯಾರ್ಥಿ ಆರ್ಥಿಕ ಸ್ನೇಹಿಯಾಗಿಸುವ ನಿಟ್ಟಿನಲ್ಲಿ ಸರ್ಕಾರದ ಆಲೋಚನೆ ಏನು? (ಮಾಹಿತಿ ನೀಡುವುದು)	ರಾಜ್ಯದ ಎಂ.ಬಿ.ಬಿ.ಎಸ್. ಪದವಿ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳ ಹಿತದೃಷ್ಟಿ ಹಾಗೂ ರಾಜ್ಯದ ಶೈಕ್ಷಣಿಕ ವಾತಾವರಣವನ್ನು ವಿದ್ಯಾರ್ಥಿಯ ಆರ್ಥಿಕ ಸ್ನೇಹಿಯಾಗಿಸುವ ನಿಟ್ಟಿನಲ್ಲಿ ಕಳೆದ 02 ವರ್ಷಗಳಿಂದ ಪ್ರವೇಶ ಶುಲ್ಕದಲ್ಲಿ ಯಾವುದೇ ಬದಲಾವಣೆಯನ್ನು ಮಾಡಿರುವುದಿಲ್ಲ.

No: MED 37 RGU 2022

(ಡಾ.ಕೆ.ಸುಧಾಕರ್)
ವೈದ್ಯಕೀಯ ಶಿಕ್ಷಣ ಹಾಗೂ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಇಲಾಖಾ ಸಚಿವರು